FEBRUARY 15,2025

ALL INDIA RADIO- DHARWAD

PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ರಾಜ್ಯದ ವಿಶ್ವವಿದ್ಯಾಲಯಗಳ ಕಾರ್ಯವೈಖರಿ ಹಾಗೂ ಆರ್ಥಿಕ ಸ್ಥಿತಿ ಕುರಿತ ಅಧ್ಯಯನಕ್ಕೆ, ಸಚಿವ ಸಂಪುಟ ಉಪ ಸಮಿತಿ ರಚಿಸಲಾಗಿದ್ದು, ರಾಜ್ಯ, ವಿಶ್ವವಿದ್ಯಾಲಯ ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ತೀರ್ಮಾನಿಸಲಿದೆ ಎಂದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಸ್ಪಷ್ಟ ಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಯವರು ತಮ್ಮ ಅಧ್ಯಕ್ಷತೆಯಲ್ಲಿ ಸಂಪುಟ ಉಪ ಸಮಿತಿ ರಚಿಸಿದ್ದಾರೆ. ಸಮಿತಿ ಚರ್ಚೆ ಮಾಡಿ, ಸಲಹೆಗಳನ್ನು ಪರಾಮರ್ಶಿಸಿದೆ. ಮುಖ್ಯಮಂತ್ರಿ ಅಧ್ಯಕ್ಷತೆಯ ಸಚಿವ ಸಂಪುಟ ಸಭೆಯಲ್ಲಿ, ಈ ಬಗ್ಗೆ ಸೂಕ್ತ ತೀರ್ಮಾನವಾಗಲಿದೆ, ಎಂದರು.

<><><>

ಕರ್ನಾಟಕ ಲಲಿತಾ ಅಕಾದೆಮಿಯು 2022–23 ಹಾಗೂ 2023–24 ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನು ಘೋಷಿಸಿದೆ. ಅಕಾದೆಮಿಯ ಗೌರವ ಪ್ರಶಸ್ತಿಗೆ ಭಾಜನರಾದವರಲ್ಲಿ ಓರ್ವರಾದ, ಬೆಂಗಳೂರು ಮೂಲದ ಬಿ.ಪಿ ಕಾರ್ತಿಕ್ ಅವರು ದೇಶದ ವಿವಿಧ ಮಹಾನಗರಗಳಲ್ಲಿ ತಮ್ಮ ಚಿತ್ರಕಲಾ ಪ್ರದರ್ಶನವನ್ನು ನೀಡಿದ್ದಾರೆ. ಪ್ರದೇಶ ಸಮಾಚಾರದೊಂದಿಗೆ ಅವರು ತಮ್ಮ ಸಂತಸವನ್ನು ಹಂಚಿಕೊಂಡಿದ್ದಾರೆ.

<><><>

ಬೈಟ್: ಬಿ.ಪಿ ಕಾರ್ತಿಕ್ 35 ಸೆಕೆಂದುಗಳು

<><><>

ಇಂದು ಸದ್ಗುರು ಸಂತ ಸೇವಾಲಾಲರ ಜಯಂತಿ. ನಾಡಿನೆಲ್ಲೆಡೆ ಜಯಂತ್ಯುತ್ಸವವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ತಮ್ಮ ಎಕ್ಸ್ ಖಾತೆಯಲ್ಲಿ ಟ್ವೀಟ್ ಮಾಡಿರುವ ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿಯವರು ಮೂಢನಂಬಿಕೆಗಳನ್ನು ಹೋಗಲಾಡಿಸಿ, ಸಾಮಾಜಿಕ ಸುಧಾರಣೆಗೆ ಶ್ರಮಿಸಿದ ಮಹಾನ್ ಸಂತ, ಸದ್ಗುರು ಸೇವಾಲಾಲ್ ಮಹಾರಾಜರ ಸೇವೆ, ಪರಿಶ್ರಮ ಸಮಾಜಕ್ಕೆ ಆದರ್ಶ ಮತ್ತು ಪ್ರೇರಣೆಯಾಗಿದೆ ಎಂದಿದ್ದಾರೆ.

ಧಾರವಾಡದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ, ಸಂತ ಸೇವಾಲಾಲ ರ ಜಯಂತ್ಯುತ್ಸವ ಆರಂಭಗೊಂಡಿದ್ದು, ಸೇವಾಲಾಲ್ ಬಂಜಾರಾ ಗುರುಪೀಠದ ಶ್ರೀ ನಿರಂಜನ ತಿಪ್ಪೇಶ್ವರ ಸ್ವಾಮೀಜಿ, ಸಾನಿಧ್ಯ ವಹಿಸಲಿದ್ದಾರೆ.

<><><>

ಗ್ರಾಮ ಆಡಳಿತಾಧಿಕಾರಿಗಳು ಅನಿರ್ದಿಷ್ಟಾವಧಿ ಮುಷ್ಕರ ನಿರತರಾಗಿರುವ ಹಿನ್ನೆಲೆ, ವಿದ್ಯಾರ್ಥಿಗಳು, ಸಕಾಲಿಕವಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯಲು, ಅನುವಾಗುವಂತೆ, ದಾವಣಗೆರೆ ಜಿಲ್ಲಾಡಳಿತ ಪರ್ಯಾಯ ವ್ಯವಸ್ಥೆ ಕೈಗೊಂಡಿದೆ ಎಂದು, ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯ ಸಹಾಯವಾಣಿ 08192–257778 ಕರೆ ಮಾಡಿ, ಪ್ರಮಾಣಪತ್ರ ಪಡೆಯಲು ಕೋರಿದ್ದಾರೆ. ಬೆಂಗಳೂರು ನಗರ ಜಿಲ್ಲೆಯ, ಪರೀಕ್ಷೆ ಹಾಗೂ ನೇಮಕಾತಿ ಉದ್ದೇಶಗಳಿಗಾಗಿ ತ್ವರಿತವಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅವಶ್ಯಕತೆಯಿರುವ ವಿದ್ಯಾರ್ಥಿಗಳು ಹಾಗೂ ಅಭ್ಯರ್ಥಿಗಳು, ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 9019913319 ನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಗದೀಶ್.ಜಿ ಅವರು ತಿಳಿಸಿದ್ದಾರೆ.

<><><>

ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಕಳೆದ ಎರಡು ವರ್ಷಗಳಿಂದ ಶಿಕ್ಷಣ ಭಾಗೀದಾರರ ಸಮಾವೇಶ ಆಯೋಜಿಸಲಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳ ಕಲಿಕೆಗೆ, ಪರೀಕ್ಷಾ ಪೂರ್ವ ತಯಾರಿಗೆ ಅಗತ್ಯವಾದ ಕ್ರಿಯಾಯೋಜನೆ ರೂಪಿಸಲಾಗುತ್ತಿದೆ ಎಂದು ಕಲಬುರಗಿ ಶಿಕ್ಷಣ ಇಲಾಖೆ ಆಯುಕ್ತರಾದ ಡಾಕ್ಟರ್ ಆಕಾಶ ಎಸ್. ಅವರು ಹೇಳಿದರು. ರಾಯಚೂರು ನಗರದ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಗೃಹದಲ್ಲಿ ಶಾಲಾ ಶಿಕ್ಷಣ ಇಲಾಖೆ, ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ ಸಹಯೋಗದಲ್ಲಿ ಆಯೋಜಿಸಲಾದ ಶಿಕ್ಷಣ ಭಾಗೀದಾರರ ಸಮಾವೇಶ–2025 ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

<><><>

ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ, ಇಂದು ಸಂಜೆ 6 ಗಂಟೆಗೆ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಸಹಕಾರಿ ರಂಗದ ಭೀಷ್ಮ ಕೆ.ಎಚ್ ಪಾಟೀಲ್ ಸ್ಮರಣಾರ್ಥ ದತ್ತಿ ನಿಧಿ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗಿದೆ. 'ಶಿಕ್ಷಣ ಕ್ಷೇತ್ರಕ್ಕೆ ಕೆ.ಎಚ್ ಪಾಟೀಲರ ಕೊಡುಗೆ' ವಿಷಯ ಕುರಿತ ರಾಜ್ಯ ದಲಿತ ಸಾಹಿತ್ಯ ಪರಿಷತ್ತಿನ ಡಾಕ್ಟರ್ ಅರ್ಜುನ ಗೊಳಸಂಗಿ ಉಪನ್ಯಾಸ ನೀಡಲಿದ್ದಾರೆ.

<><><>

ಉಪ ಲೋಕಾಯುಕ್ತ ಬಿ. ವೀರಪ್ಪ ಅವರು, ಹಾವೇರಿ ಜಿಲ್ಲಾ ಪಂಚಾಯ್ತಿ ಸಭಾಂಗಣದಲ್ಲಿ, ದೂರುಗಳ ವಿಚಾರಣೆ ನಡೆಸಿದರು.

<><><>

ಐತಿಹಾಸಿಕ ಪ್ರವಾಸಿ ತಾಣ, ಸ್ಮಾರಕಗಳ ದರ್ಶನ ಮಾಡುವ ಮೂಲಕ ವಿದ್ಯಾರ್ಥಿಗಳು ಇತಿಹಾಸ, ಕಲೆ, ಸಂಸ್ಕೃತಿ, ಐತಿಹಾಸಿಕ ಸ್ಥಳಗಳ ಮಹತ್ವ ತಿಳಿದುಕೊಳ್ಳಲು, ಕರ್ನಾಟಕ ದರ್ಶನ ಪ್ರವಾಸ ಕಾರ್ಯಕ್ರಮ ಸಹಾಯಕಾರಿಯಾಗಿದೆ ಎಂದು ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಹೇಳಿದರು. ಇಂದು ಪ್ರವಾಸೋದ್ಯಮ ಇಲಾಖೆ ವತಿಯಿಂದ 2024–25ನೇ ಸಾಲಿನ ಶೈಕ್ಷಣಿಕ ಪ್ರವಾಸ 'ಕರ್ನಾಟಕ ದರ್ಶನ' ಪ್ರವಾಸ ಕಾರ್ಯಕ್ರಮಕ್ಕೆ ನಗರದ ಕೆಎಸ್‌ಟಿಡಿಸಿ ಹೊಟೇಲ್ ಆವರಣದಲ್ಲಿ ಚಾಲನೆ ನೀಡಿ ಅವರು ಮಾತನಾಡಿದರು.

<><><>

ರಾಜ್ಯಾದ್ಯಂತ ಇಂದು, ವಿವಿಧ ವಸತಿ ಶಾಲೆಗಳ 6ನೇ ತರಗತಿ ಪ್ರವೇಶಾತಿಗೆ, ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯಲಿದೆ. ಜಿಲ್ಲಾಡಳಿತಗಳಿಂದ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..